# ಬೆಳಗಾವಿ ಸಮಗ್ರ ಅಭಿವೃದ್ಧಿಗಾಗಿ ಸ್ಪರ್ಧೆ ; ಮೃಣಾಲ ಹೆಬ್ಬಾಳ್ಕರ್



ಬೆಳಗಾವಿ: ಬೆಳಗಾವಿ ಮಹಾನಗರವನ್ನು ನಿಜ ಅರ್ಥದಲ್ಲಿ ಸ್ಮಾರ್ಟ್ ಸಿಟಿಯನ್ನಾಗಿ ಮಾಡುವ ಗುರಿಯೊಂದಿಗೆ ಚುನಾವಣೆಯಲ್ಲಿ ತಾವು ಸ್ಪರ್ಧಿಸಿರುವುದಾಗಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳ್ಕರ್ ಹೇಳಿದ್ದಾರೆ.

ಬೆಳಗಾವಿ ನಗರದ ವಿವಿಧೆಡೆ ಶುಕ್ರವಾರ ಸಂಜೆ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬೆಳಗಾವಿ ಕ್ಷೇತ್ರದಲ್ಲಿ ಜನತೆ ಬಿಜೆಪಿಗೆ ಕಳೆದ ಇಪ್ಪತ್ತು ವರ್ಷಗಳಿಂದ ಅಧಿಕಾರ ಕೊಟ್ಟಿದ್ದಾರೆ; ಆದರೆ, ಇನ್ನೂ ಅಭಿವೃದ್ಧಿಯಾಗಿಲ್ಲ. ಬಿಜೆಪಿಯವರು ಅಭಿವೃದ್ಧಿ ಮುಂದಿಟ್ಟುಕೊಂಡು ಜನರ ಮನೆ ಬಾಗಿಲಿಗೆ ಬರುತ್ತಿಲ್ಲ; ನನ್ನ ನೋಡಿ ಓಟು ಕೊಡಬೇಡಿ; ಪ್ರಧಾನ ಮೋದಿಯವರನ್ನು ನೋಡಿ ಓಟು ಕೊಡಿ ಎಂದು ಕೇಳುತ್ತಿದ್ದಾರೆ; ಇದು ಕ್ಷೇತ್ರದ ಜನರಿಗೆ ಮಾಡುತ್ತಿರುವ ದ್ರೋಹ ಎಂದು ಕಿಡಿಕಾರಿದರು.

*ಮಜಬೂರ್ ಎಂಪಿ ತಿರಸ್ಕರಿಸಿ; ಮಜಬೂತ್ ಎಂಪಿ ಬೇಕು*

ನಮ್ಮ ತಾಯಿ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ರವರು 2014ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದಾಗ ಬಿಜೆಪಿಯವರೊಂದು ಸ್ಲೋಗನ್ ಹೇಳುತ್ತಿದ್ದರು. ಆದೇನೆಂದರೆ, ಮೋದಿ ಜರೂರ್ ಹೈ ಎಂಪಿ ಮಜಬೂರ್ ಹೈ ಎಂದು. ಆದರೆ, ನಾವಿಂದು ಹೇಳುವುದೇನೆಂದರೆ, ನಮಗೆ ಮಜಬೂರ್ ಎಂಪಿ ಬೇಡ; ಮಜಬೂತ್ ಎಂಪಿ ಬೇಕು; ಮಜಬೂತ್ ಎಂಪಿ ಇದ್ದರೇನೇ, ಅಭಿವೃದ್ಧಿ ಆಗೋದು; ನಮ್ಮೆಲ್ಲ ಯುವಕರಿಗೆ ನೌಕರಿ ಸಿಗೋದು ಎಂದು ಬಿಜೆಪಿ ವಿರುದ್ಧ ಲೇವಡಿ ಮಾಡಿದರು.

ನಮ್ಮ ಬೆಳಗಾವಿಯನ್ನು ರಾಜ್ಯದ ಎರಡನೇ ರಾಜಧಾನಿಯೆಂದು ಕರೆಸಿಕೊಳ್ಳುವುದಕ್ಕೆ ನಮಗೆಲ್ಲ ಹೆಮ್ಮೆ ಆಗುತ್ತದೆ. ಇಂದು ದೊಡ್ಡ ದೊಡ್ಡ ಫ್ಯಾಕ್ಟರಿಗಳೆಲ್ಲ ಹುಬ್ಬಳ್ಳಿ –ಧಾರವಾಡಕ್ಕೆಗೆ ಹೋಗಿವೆ; ಹೈಕೋರ್ಟ್, ಐಐಟಿ ಕಾಲೇಜು; ನಮ್ಮ ಯುವಕರಿಗೆ ನೌಕರಿ ಮಾಡುವ ಸವಲತ್ತುಗಳೆಲ್ಲ ಹುಬ್ಬಳ್ಳಿಗೆ ಹೋಗಿವೆ; ಇವೆನ್ನೆಲ್ಲ ಯಾರು ತೆಗೆದುಕೊಂಡು ಹೋಗಿದ್ದಾರೆ ಎನ್ನುವುದನ್ನು ನೀವೇ ಯೋಚನೆ ಮಾಡಿ ಎಂದ ಮೃಣಾಲ ಹೆಬ್ಬಾಳ್ಕರ್, ದುರಾದೃಷ್ಟಕರ ಸಂಗತಿ ಏನೆಂದರೆ ನಮ್ಮ ವಿರುದ್ಧ ಸ್ಪರ್ಧೆ ಮಾಡಿರುವ ಪಕ್ಷದ ಅಭ್ಯರ್ಥಿ ಕೂಡ ಹುಬ್ಬಳ್ಳಿಯವರು; ಏನಾದರೂ ನಮ್ಮ ಕೆಲಸ ಕಾರ್ಯಗಳು , ಕ್ಷೇತ್ರದ ಅಭಿವೃದ್ಧಿ ಆಗಬೇಕೆಂದರೆ ಹುಬ್ಬಳ್ಳಿಗೆ ಹೋಗಬೇಕಾಗುತ್ತೆ; ಹಾಗಾಗಿ ಈ ಬಗ್ಗೆ ನೀವೇ ಯೋಚನೆ ಮಾಡಿ ಮತ ಚಲಾಯಿಸಿ ಎಂದರು.

ಬೆಳಗಾವಿ ಬಗ್ಗೆ ಗೊತ್ತಿರುವ ವ್ಯಕ್ತಿ ನಾನು

ಬುದ್ಧಿವಂತರಾದ ಕ್ಷೇತ್ರದ ಜನತೆ ಅರ್ಥಮಾಡಿಕೊಳ್ಳುವ ಕಾಲ ಬಂದಿದೆ. ನಮಗೆ ಸ್ಥಳೀಯರು ಬೇಕೋ..? ಅಥವಾ ದೂರದಲ್ಲಿರುವ ವ್ಯಕ್ತಿ ಬೇಕೋ ಎಂದು ಜನತೆಯನ್ನು ಪ್ರಶ್ನಿಸಿದ ಅವರು, ಇದು ನಮ್ಮ ಬೆಳಗಾವಿ ಜಿಲ್ಲೆಯ ಜನತೆಯ ಸ್ವಾಭಿಮಾನ, ಆಸ್ಮಿತೆಯ ಪ್ರಶ್ನೆ. ಹಾಗಾಗಿ, ಈ ಬಾರಿ ನಮ್ಮ ಮನೆ ಮಗನಾದ ನನಗೊಮ್ಮೆ ಅವಕಾಶ ಮಾಡಿಕೊಡಿ; ಬೆಳಗಾವಿಗೆ ಏನೆಲ್ಲ ಬೇಕು ಎನ್ನುವುದು ಚೆನ್ನಾಗಿ ಗೊತ್ತು; ನಾನು ಇಲ್ಲೇ ಹುಟ್ಟಿ ಬೆಳೆದವನು; ಜನರ ಕಷ್ಟಸುಖಗಳೇನು ಎನ್ನುವುದೂ ಗೊತ್ತು; ಈ ಭಾಗದ ಜನರಾಡುವ ಭಾಷೆಗಳೆಲ್ಲ ಗೊತ್ತು; ನಾನು ಇಂಜಿನಿಯರ್ ಇದ್ದೇನೆ; ನಮ್ಮ ತಾಯಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಡುತ್ತಿರುವ ಕೆಲಸ ಕಾರ್ಯಗಳನ್ನು ಬಹಳ ಗಮನಕೊಟ್ಟು ನೋಡಿ; ಕಲಿತುಕೊಂಡಿದ್ದೇನೆ. ಬರುವಂತಹ ದಿನಮಾನಗಳಲ್ಲಿ ಬೆಳಗಾವಿಯನ್ನು ಸ್ಮಾರ್ಟ್ ಸಿಟಿಯನ್ನಾಗಿ ಮಾಡುವ ಗುರಿ ಇಟ್ಟುಕೊಂಡಿದ್ದೇನೆ; ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರ ಜೊತೆ ಸೇರಿ ಅಭಿವೃದ್ಧಿ ಮಾಡುತ್ತೇನೆ. ತಾವೆಲ್ಲರೂ ಆಶೀರ್ವಾದಿಸಿ ಎಂದು ಮೃಣಾಲ ಹೆಬ್ಬಾಳ್ಕರ್ ಮನವಿ ಮಾಡಿದರು.

ನೆಹರು ನಗರದಲ್ಲಿ ಹಮ್ಮಿಕೊಂಡಿದ್ದ ಪೌರ ಕಾರ್ಮಿಕರ ಸಂಘದ ಸಭೆ, ಸದಾಶಿವ ನಗರ, ಅಂಬೇಡ್ಕರ್ ನಗರ, ಶಿವಬಸವ ನಗರ, ರಾಮತೀರ್ಥ ನಗರ, ಕಣಬರ್ಗಿ ಮೊದಲಾದ ಪ್ರದೇಶದಲ್ಲಿ ಪ್ರಚಾರ ಸಭೆ ನಡೆಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಶಾಸಕ ರಾಜುಸೇಠ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮಾಜಿ ಶಾಸಕರಾದ ಎಸ್.ಸಿ.ಮಾಳಗಿ, ಮಾಜಿ ಸಚಿವರಾದ ಶಶಿಕಾಂತ್ ನಾಯಕ್, ಆರ್.ಪಿ.ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ವಿನಯ ನಾವಲಗಟ್ಟಿ, ರೋಹಿಣಿ ಪಾಟೀಲ, ಎಸ್.ಎಸ್.ಕಿವಡಸಣ್ಣವರ್, ಆಸೀಫ್ ಮುಲ್ಲಾ, ಬೈರೆಗೌಡ, ಅಜಿತ್ ಚೌಹಾನ್, ಸತೀಶ್ ಜಾಧವ್, ಶಿವಾಜಿ ಜಾಧವ್, ಸಂಭಾಜೀ ಜಾಧವ್, ಅಕ್ಷಯ ಚೌಹಾನ್, ಸರಳಾ ಹೆರೆಕಾರ್, ಯಲ್ಲಪ್ಪ ನಾಯಿಕ್, ರಾಕೇಶ್ ಗುನ್ನವಗೋಳ, ಗಣೇಶ್ ರನ್ನದ್, ಅಜಯ ಬಿರಂಜೆ, ಸಂಜಯ ಸಸಾನೇ, ಮೋಹನ್ ಸಸಾನೇ, ರವಿ ದೇಮಟ್ಟಿ, ಮಹೇಂದ್ರ ಕವಳಗಿ, ಜಾನ್ ಲೊಂಡೆ, ವಿಜಯ್ ಲೊಂಡೆ, ರಮನ್ ಚೌಗುಲೆ, ನೇಸರ್ ಲೊಂಡೆ, ವಿಜಯೇಂದ್ರ ಲೊಂಡೆ, ಸ್ವಯಂ ಲೊಂಡೆ, ಓಂಕಾರ್ ಲೊಂಡೆ, ಮುಗಟಸಾಬ್ ಹೊಂಗಲ, ತಾಹಿರ್ ಸೈಯದ್, ಎಂ.ಬಿ.ನಿರ್ವಾಣಿ, ಎಂ.ಎಂ.ಕಿತ್ತೂರ್, ಸಿ.ಬಿ.ಪಾಟೀಲ, ವಕೀಲರಾದ ಯರಗಣವಿ, ಲತಾ ಮಾನೆ, ಪುಷ್ಪ ಪರ್ವತರಾವ್, ರಾಜಾ ಸಲೀಂ, ದಿನೇಶ್ ನಾಶಿಪುಡಿ, ಜ್ಯೋತಿ ಬಾವಿಕಟ್ಟಿ, ಅನುಶ್ರೀ ದೇಶಪಾಂಡೆ, ಸರಳಾ ಹೆರೆಕರ್, ಜಯಶ್ರೀ ಮಾಳಗಿ, ಶಿವಾನಂದ ತಂಬಾಕೆ, ಸಂತೋಷ ಪರ್ವತರಾವ್ ಮೊದಲಾದವರು ಉಪಸ್ಥಿತರಿದ್ದರು.

# ಮೇ 1 ರಂದು ಮತಗಟ್ಟೆ ಅಧಿಕಾರಿಗಳಿಗೆ 2ನೇ ಹಂತದ ತರಬೇತಿ

ಗದಗಏಪ್ರಿಲ್ 27:– ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ 2 ನೇ ಹಂತದ ತರಬೇತಿಯ ಕಾರ್ಯಕ್ರಮವು ಮೇ 1 ರಂದು ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಾದ ಗದಗ, ಶಿರಹಟ್ಟಿ, ನರಗುಂದ ಹಾಗೂ ರೋಣ ವ್ಯಾಪ್ತಿಯಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳನ್ನು ಕರೆದುಕೊಂಡು ಬರಲು ಮತ್ತು ಹೋಗಲು ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

ಬಸ್ ಹೊರಡುವ ಸ್ಥಳಗಳ ವಿವರ: ಗದಗ ನಗರದ ಮುನ್ಸಿಪಲ್ ಕಾಲೇಜು, ಶಿರಹಟ್ಟಿಯ ಎಫ್‌ಎಂ ಡಬಾಲಿ ಕಾಲೇಜು, ನರಗುಂದದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ನರಗುಂದದ ಬಸ್ ನಿಲ್ದಾಣ ಎದುರು, ರೋಣದ ತಹಶೀಲ್ದಾರ್ ಕಚೇರಿ, ಮುಂಡರಗಿಯ ತಹಶೀಲ್ದಾರ್ ಕಚೇರಿ, ಗಜೇಂದ್ರಗಡದ ತಹಶೀಲ್ದಾರ್ ಕಚೇರಿ, ಲಕ್ಷ್ಮೇಶ್ವರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಈ ಸ್ಥಳಗಳಿಂದ ಮೇ 1 ಬೆಳಿಗ್ಗೆ 8 ಗಂಟೆಗೆ ಬಸ್ ಹೊರಡಲಿದೆ.

ನಮೂನೆ 12 ಸಲ್ಲಿಸಿದವರಿಗೆ ಅಂಚೆ ಮತಪತ್ರ ನೀಡಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ. ಮತದಾರ ಭಾವಚಿತ್ರ ಒಳಗೊಂಡ ಗುರುತಿನ ಚೀಟಿ ಹಾಗೂ ಚುನಾವಣಾ ಕರ್ತವ್ಯ ನಿಯೋಜನೆ ಪತ್ರ ಹಾಜರುಪಡಿಸಿ ಮತ ಚಲಾಯಿಸಬಹುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ತಿಳಿಸಿದ್ದಾರೆ.

ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳು ಮೇ 1 ರಂದು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ತರಬೇತಿಗೆ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಸೂಚಿಸಿದ್ದಾರೆ.

# ಪರಿಹಾರ ಕೊಡಿಸಿದ ಸುಪ್ರೀಂ ಕೋರ್ಟ್‌ಗೆ ಧನ್ಯವಾದಗಳು: ಸಿದ್ದರಾಮಯ್ಯ

'ಬೆಂಗಳೂರು: ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಿ ಕರ್ನಾಟಕಕ್ಕೆ ಸ್ವಲ್ಪವಾದರೂ ಬರ ಪರಿಹಾರ ಕೊಡಿಸಿದ ಸುಪ್ರೀಂ ಕೋರ್ಟ್ ಗೆ ಧನ್ಯವಾದಗಳು. ಎನ್ ಡಿ ಆರ್ ಎಫ್ ನಿಯಮವಾಳಿ ಪ್ರಕಾರ ರಾಜ್ಯಕ್ಕೆ ರೂ.18,171 ಕೋಟಿ ನೀಡಬೇಕಾಗಿದ್ದರೂ ಕೇಂದ್ರ ಸರ್ಕಾರ ಕೇವಲ ರೂ. 3,498 ಕೋಟಿಗೆ ಅನುಮೋದನೆ ನೀಡಿ, ರೂ. 3,454 ಕೋಟಿ ಬಿಡುಗಡೆ ಮಾಡಿದೆ. ಬರಪರಿಹಾರಕ್ಕಾಗಿ ಈ ಹಣ ಸಾಲದು. ಬಾಕಿ ಪರಿಹಾರಕ್ಕಾಗಿ ನಮ್ಮ ಹೋರಾಟ ಮುಂದುವರಿಯಲಿದೆ.

ಕೇಂದ್ರ ಸರ್ಕಾರ ಕರ್ನಾಟಕದ ಮೇಲೆ ಕಾಳಜಿಯಿಂದ ಈ ಬರ ಪರಿಹಾರ ನೀಡಿಲ್ಲ. ನಾವು ಸುಪ್ರೀಂಕೋರ್ಟ್ ಮೆಟ್ಟಿಲು ಹತ್ತಿ ನಮ್ಮಲ್ಲಿನ ಬರಸ್ಥಿತಿಯನ್ನು ಮನವರಿಕೆ ಮಾಡಿ ಕೊಟ್ಟಿದ್ದೆವು. ಈ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಗೆ ರಾಜಕೀಯ ದುರುದ್ದೇಶದಿಂದ ಕೇಂದ್ರ ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಮನವರಿಕೆಯಾಗಿದೆ. ನ್ಯಾಯಾಲಯ ವಿಚಾರಣೆ ವೇಳೆ ಚಾಟಿ ಬೀಸಿದ ನಂತರ ವಾರದ ಅವಧಿಯೊಳಗೆ ಬರ ಪರಿಹಾರ ನೀಡಲಾಗುವುದು ಎಂದು ಸುಪ್ರೀಂ ಕೋರ್ಟ್ ಗೆ ವಚನ ನೀಡಿತ್ತು. ಅದನ್ನು ಪಾಲಿಸಲಿಕ್ಕಾಗಿ ಒಲ್ಲದ ಮನಸ್ಸಿನಿಂದ ಈ ಪರಿಹಾರ ನೀಡಿದೆ. ಇದರಲ್ಲಿ ಬಿಜೆಪಿಯ ನಾಯಕರದ್ದಾಗಲಿ, ಕೇಂದ್ರ ಸರ್ಕಾರದ್ದಾಗಲಿ ಯಾವ ಪಾತ್ರವೂ ಇಲ್ಲ. ಇದು ಕೃಷಿ ಕ್ಷೇತ್ರ ಮತ್ತು ರಾಜ್ಯದ ರೈತರ ಮೇಲೆ ಸುಪ್ರೀಂಕೋರ್ಟ್ ಇಟ್ಟುಕೊಂಡಿರುವ ಕಾಳಜಿಯ ಫಲ. ಸ್ವಲ್ಪವಾದರೂ ಪರಿಹಾರವನ್ನು ನೀಡದೆ ಇದ್ದರೆ ರೊಚ್ಚಿಗೆದ್ದಿರುವ ಕರ್ನಾಟಕದ ಜನ ಚುನಾವಣಾ ಪ್ರಚಾರಕ್ಕಾಗಿ ತಮ್ಮನ್ನು ರಾಜ್ಯಕ್ಕೆ ಕಾಲಿಡಲು ಬಿಡಲಾರರು ಎಂಬ ಭಯವೂ ಈ ಪರಿಹಾರ ಘೋಷಿಸಲು ಕಾರಣವಾಗಿದೆ. ಈ ಅಲ್ಪ ಪರಿಹಾರವನ್ನು ತಮ್ಮ ಸಾಧನೆ ಎಂದು ರಾಜ್ಯದ ಬಿಜೆಪಿ ನಾಯಕರು ಬಿಂಬಿಸಲು ಹೊರಟರೆ ರಾಜ್ಯದ ಜನ ಅವರಿಗೆ ತಕ್ಕ ಉತ್ತರ ನೀಡಬೇಕೆಂದು ಮನವಿ ಮಾಡುತ್ತೇನೆ. ಈ ಬರ ಪರಿಹಾರದ ಹಿಂದಿನ ಕಾರಣಗಳೇನೇ ಇರಲಿ, ನೀಡಿರುವ ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ. ಸಾಧ್ಯವಾದಷ್ಟು ಶೀಘ್ರ ಬಾಕಿ ಪರಿಹಾರದ ಹಣವನ್ನು ಬಿಡುಗಡೆಗೊಳಿಸಬೇಕೆಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಒತ್ತಾಯಿಸುತ್ತಿದ್ದೇನೆ. ಇದೇ ರೀತಿ ತೆರಿಗೆ ಹಂಚಿಕೆಯಲ್ಲಿನ ಅನ್ಯಾಯವನ್ನು ಕೂಡಾ ಕೇಂದ್ರ ಸರ್ಕಾರ ಸರಿಪಡಿಸಬೇಕೆಂದು ಆಗ್ರಹಿಸುತ್ತೇನೆ.ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ಎಂದು ನಾವು 13–9–2024ರಂದು ಘೋಷಿಸಿದ್ದೆವು. ಈಗ ಏಳು ತಿಂಗಳುಗಳಾಗುತ್ತಾ ಬಂತು. 48 ಲಕ್ಷ ಹೆಕ್ಟೇರ್ ನಲ್ಲಿ ಬೆಳೆ ಹಾನಿಯಾಗಿದೆ. ಇದರಿಂದಾಗಿ 35,162 ಕೋಟಿ ರೂಪಾಯಿಗಳಷ್ಟು ನಷ್ಟವಾಗಿದೆ. ಕೇಂದ್ರ ಸರ್ಕಾರದಿಂದ ನಾವು ಪರಿಹಾರ ಕೇಳಿರುವುದು ಹೆಚ್ಚು ಕಡಿಮೆ ಅದರ ಅರ್ಧದಷ್ಟು ಅಂದರೆ ರೂ.18,171 ಕೋಟಿ. ಉಳಿದ ಹಣವನ್ನು ರಾಜ್ಯ ಸರ್ಕಾರ ತನ್ನ ಸಂಪನ್ಮೂಲದಿಂದಲೆ ಭರಿಸುತ್ತಿದೆ. ಈಗ ಬಿಡುಗಡೆಯಾಗಿರುವುದು ರೂ. 3,454 ಕೋಟಿ ಮಾತ್ರ. ಉಳಿದ ಪರಿಹಾರಕ್ಕಾಗಿ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಹಳ್ಳಿಯ ಹುಲಿ ಕೊಟ್ಟ ಬೆಳ್ಳಿಯ ಕಾಲುಂಗುರ ನಾಟಕ ಉದ್ಘಾಟನೆ



ಬೈಲಹೊಂಗಲ: ನಾಟಕಗಳಲ್ಲಿ ಬರುವ ಪಾತ್ರಗಳು ಕೇವಲ ಮನರಂಜನೆಗೆ ಮಾತ್ರ ಸೀಮಿತವಾಗದೆ ಅದರಲ್ಲಿರುವ ಒಳ್ಳೆಯತನವನ್ನು ನಿಜ ಜೀವನದಲ್ಲಿ ಅಳವಡಿಸಿಕೊಂಡು ಕೆಟ್ಟದಾರಿಯನ್ನು ತೇಜಿಸಿ ಮ್ಯಾನ್ನಿಡಿಂಯಲಿಕ್ಕೆ ಸಹಕಾರಿಯಾಗಿವೆ ಎಂದು ನ್ಯಾಯವಾದಿ ಎಫ್.ಎಸ್.ಸಿದ್ದನಗೌಡರ ಹೇಳಿದರು. ಸಮೀಪದ ಹೊಸೂರ ಗ್ರಾಮದಲ್ಲಿ ಗುರು ಮಡಿವಾಳೇಶ್ವರ ಜಾತ್ರಾ ನಿಮಿತ್ಯ ಜರುಗಿದ ಹಳ್ಳಿಯ ಹುಲಿ ಕೊಟ್ಟ ಬೆಳ್ಳಿಯ ಕಾಲುಂಗುರ ನಾಟಕ ಉದ್ಘಾಟಿಸಿ ಮಾತನಾಡಿ, ವ್ಯಕ್ತಿಯಲ್ಲಿರುವ ಕಲೆಯನ್ನು ಹೊರ ತರಲು ಹಾಗೂ ಪ್ರೇಕ್ಷಕರ ಮನಸ್ಸಿಗೆ ಮನರಂಜನೆ ನೀಡುವ ಉದ್ದೇಶದಿಂದ ಹಳ್ಳಿಗಳಲ್ಲಿ ಯುವ ನಾಟ್ಯ ತಂಡಗಳು ನಾಟಕಗಳನ್ನು ಜಾತ್ರಾ ಮಹೋತ್ಸವ ದಲ್ಲಿ ಆಯೋಜನೆ ಮಾಡುತ್ತಿರುವದು ಶ್ಲಾಘನೀಯ. ಇಂದಿನ ಯುವ ಪೀಳಿಗೆ ಮೊಬೈಲ್ ಫೋನ್ ಬಳಕೆಯಿಂದ ಗ್ರಾಮೀಣ ಕಲೆ ನಶಿಸುತಿದ್ದು ಯುವಕರು ಜೀವನದಲ್ಲಿ ನಿರುತ್ಸಾಹ ಹೆಚ್ಚಾಗುತ್ತಿದ್ದು ದುಶ್ಚಟಗಳಿಗೆ ಅಂಟಿಕೊಳ್ಳುತ್ತಿರುವದು ಕಳವಳಕಾರಿಯಾಗಿದೆ. ಯುವ ಶಕ್ತಿ ಆಧ್ಯಾತ್ಮದ ಕಡೆ ಹೆಚ್ಚಿನ ಒಲವು ತೋರುತ್ತಾ ಸಂಸ್ಕಾರಯುತವಾಗಿದ್ದರೆ ಸಮಾಜ ಸ್ವಸ್ಥ್ಯದಿಂದ ಇರುತ್ತದೆ ಎಂದರು. ಶಿಕ್ಷಕ ಈರಣ್ಣ ಬೆಂಡಿಗೇರಿ ಮಾತನಾಡಿ, ಹುಟ್ಟಿದ ಸಂದರ್ಭದಲ್ಲಿ ಬಡತನವಿದ್ದರು ಅದು ನಮ್ಮ ತಪ್ಪಲ್ಲ. ಅದನ್ನು ಮೆಟ್ಟಿನಿಂತು ಜೀವನ ಸಾಗಿಸಬೇಕು. ದೇವರು ಕೊಟ್ಟ ಈ ಜನ್ಮದಲ್ಲಿ ಉನ್ನತ ಗುರಿ ಇಟ್ಟುಕೊಂಡು ಸಾಧನೆಯತ್ತ ಯುವಶಕ್ತಿ ಸಾಗಬೇಕಾಗಿದೆ. ಆದರೆ ಅನೇಕ ಯುವಕರು ತಮ್ಮ ಜೀವದ ಕಷ್ಟಗಳನ್ನು ಎದುರಿಸಾಲಗದೆ ಆತ್ಮಹತ್ಯೆಯಂತಹ ದಾರಿ ಹಿಡಿಯುತ್ತಿರುವದು ಅತ್ಯಂತ ದುರದೃಷ್ಟಕರ. ಆದ್ದರಿಂದ ಅಂತಹ ದಾರಿಯುಲ್ಲಿ ಸಾಗದೆ ಕ್ರಿಯಾಶೀಲತೆಯಿಂದ ಸ್ವಯಂ ಕಾರ್ಯದಲ್ಲಿ ತೊಡಗಿಕೊಂಡು ಉದ್ಯೋಗಶಿಲರಾಗಬೇಕೆಂದರು. ಗುರು ಮಡಿವಾಳೇಶ್ವರ ಮಠದ ಪೀಠಾದಿಪತಿ ಗಂಗಾಧರ ಸ್ವಾಮೀಜಿ ಸಾನಿಧ್ಯವಹಿಸಿದ್ದರು.ಕಾರ್ಯಕ್ರಮದಲ್ಲಿ ಮಾಜಿ ಡಿಸಿಸಿ ಬ್ಯಾಂಕ್ ನಿರ್ದೇಶಕ ವಿ.ಡಿ.ಸಂಗಣ್ಣವರ, ಗದಿಗೆಪ್ಪ ಬೆಂಡಿಗೇರಿ, ಶಂಕರ ಕಳ್ಳಿ, ಎಸ್.ಕೆ.ಮೆಳ್ಳಿಕೇರಿ, ಸುರೇಶ ಬಾಳೆಕುಂದರಗಿ, ಗುರಶಾಂತಯ್ಯ ಹೀರೆಮಠ, ಪುಂಡಲಿಕ ನಾಗನೂರ, ಶ್ರೀಶೈಲ ಬಾಳೆಕುಂದರಗಿ, ಮಲ್ಲಿಕಾರ್ಜುನ ಸಂಪಗಾಂವ, ಬಸವರಾಜ ವೀವೆಕಿ, ಆನಂದ ಮತ್ತಿಕೊಪ್ಪ, ಆನೆಪ್ಪ ಬಾಳೆಕುಂದರಗಿ, ನಿಂಗಪ್ಪ ಆರೇರ, ಈರಯ್ಯ ಹೀರೆಮಠ, ಕುಮಾರ ಗಣಾಚಾರಿ, ಮಲ್ಲಿಕಾರ್ಜುನ ವಿವೇಕಿ, ಶಂಕರ ಲಂಗೋಟಿ, ಕಿರಣ ಬಾಳೆಕುಂದರಗಿ,ಮಡಿವಾಳಪ್ಪ ಆರೇರ, ಮಲ್ಲಪ್ಪ ಯರಡಾಲ, ಈರಣ್ಣ ಬಾಳೆಕುಂದರಗಿ, ಮಡಿವಾಳಪ್ಪ ಕಕ್ಕೇರಿ, ಶ್ರೀಕಾಂತ ಹೀರೆಮಠ, ಕಾರೆಪ್ಪ ಬಾಳೆಕುಂದರಗಿ, ನಾಗಪ್ಪ ಆರೇರ, ಮಹಾಂತೇಶ ಮೂಲಿಮನಿ,ಮಂಜು ಬಾಳೆಕುಂದರಗಿ, ಈರಪ್ಪ ಆರೇರ, ಮಹೇಶ ಸಂಗೊಳ್ಳಿ, ಸಂತೋಷ ಆರೇರ, ಬಸವರಾಜ ಕಕ್ಕೇರಿ, ಶಿವಪ್ಪ ಬಾಳೆಕುಂದರಗಿ, ಶ್ರೀಶೈಲ ಆರೇರ, ಫಕೀರ ಜಾಧವ, ಮಹಾಂತೇಶ ಅವರಾಧಿ, ಮಂಜುನಾಥ ಪೇಂಟೆದ, ಸಂಜು ಪಾಟೀಲ, ಮಂಜುನಾಥ ಕಳ್ಳಿ, ಮಡಿವಾಳಪ್ಪ ಬಾಳೆಕುಂದರಗಿ, ಇದ್ದರು. ಗ್ರಾಪಂ ಸದಸ್ಯ ಬಸವರಾಜ ಬಾಳೆಕುಂದರಗಿ ಸ್ವಾಗತಿಸಿದರು. ಗಜಾನನ ಆರೇರ ನಿರೂಪಿಸಿದರು.

# ದೇಶದ ಉತ್ತಮ ಭವಿಷ್ಯ ಹಾಗೂ ಭದ್ರತೆಗಾಗಿ ಬಿಜೆಪಿಗೆ ಬೆಂಬಲಿಸಿ: ಜಗದೀಶ್ ಶೆಟ್ಟರ್

ಬೆಳಗಾವಿ: ದಿನದ 24 ಗಂಟೆ ದೇಶದಲ್ಲಿ ಮೋದಿಯವರು ಕೆಲಸ ಮಾಡಿದ್ದಾರೆ ಹಾಗೂ ಮೋದಿಯವರ ದೂರ ದೃಷ್ಟಿ ದೇಶದ ಚಿತ್ರಣವನ್ನೆ ಬದಲಾವಣೆ ಮಾಡಿದೆ ಹಾಗಾಗಿ ಮತ್ತೊಮ್ಮೆ ಮೋದಿಯವರನ್ನು ಪ್ರಧಾನ ಮಾಡಲು ನನ್ನನ್ನು ಗೆಲ್ಲಿಸಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಮನವಿ ಮಾಡಿದರು.

ನಗರದ ಕೆಎಲ್‌ಇ ಶೇಷದ್ರಿ ಕಾಲೇಜಿನಲ್ಲಿ ಲೋಕಸಭಾ ಚುನಾವಣೆ ನಿಮಿತ್ಯ ಪ್ರಚಾರ ಸಭೆ ನಡೆಸಿ ಮಾತನಾಡಿದ ಅವರು, ಗುಜರಾತ್



ಮಾಡೆಲ್ ಮ?ಲಕ ಮೋದಿಯವರು ದೇಶದಲ್ಲಿ ಮನೆ ಮಾತಾಗಿದ್ದಾರೆ ಅಂತಹ ವ್ಯಕ್ತಿ 2014 ರಲ್ಲಿ ಪ್ರಧಾನ ಆದರು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಲೋಕಸಭಾ ಚುನಾವಣೆಗೆ ಬಹಳಷ್ಟು ಸ್ಥಾನಮಾನ ಇದೆ. ದೇಶದ ಭದ್ರತೆ, ದೇಶದ ಭವಿಷ್ಯ ನಿರ್ಧಾರ ಮಾಡುವ ಚುನಾವಣೆ ಎಂದರೆ ಅದು ಲೋಕಸಭಾ ಚುನಾವಣೆ, ಮೋದಿಯವರು ತಮ್ಮ ಆಡಳಿತ ಅವಧಿಯಲ್ಲಿ ಒಂದೆ ಒಂದು ಕಪ್ಪು ಚುಕ್ಕೆ ಇಲ್ಲದಂತೆ ಆಡಳಿತ ಮಾಡಿದ್ದಾರೆ. ಭ್ರಷ್ಟಾಚಾರ ರಹಿತ ಆಡಳಿತ ಕೊಟ್ಟಿದ್ದಾರೆ. ಹಿಂದಿನ ಯುಪಿಯ ಸರ್ಕಾರದಲ್ಲಿ 2ಜಿ ಹಗರಣ ಸೇರಿದಂತೆ ಅನೇಕ ಹಗರಣಗಳು ಬೆಳಕಿಗೆ ಬಂದವವು, ಲಕ್ಷಾಂತರ ಕೋಟಿಯ ಹಗರಣಗಳ ತನಿಖೆ ಇಂದು ನಡೆಯುತ್ತಿದೆ. ಆದರೆ 10 ವರ್ಷದ ಆಡಳಿತದಲ್ಲಿ ಮೋದಿಯವರು ಒಂದೆ ಒಂದು ಭ್ರಷ್ಟಾಚಾರ ಇಲ್ಲದೆ ಆಡಳಿತ ಮಾಡಿದ್ದಾರೆ ಎಂದು ತಳಿಸಿದರು.

ಹಿಂದಿನ ಸರ್ಕಾರದಲ್ಲಿ 100 ರೂಪಾಯಿ ಜನರಿಗೆ ಬಿಡುಗಡೆ ಆದರೆ ಫಲಾನುಭವಿಗೆ ಕೇವಲ 15 ರೂಪಾಯಿ ತಲುಪತ್ತಿತ್ತು. ಅಷ್ಟೊಂದು ಹಗರಣ ನಡೆಯುತ್ತಿತ್ತು. ಆದರೆ ಮೊದಿಯವರು ಆಡಳಿತ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ಭ್ರಷ್ಟಾಚಾರ ಕೊನೆಗಾಣಿಸಿದರು. ಕೃಷಿ ಸಮ್ಮಾನ್ ಯೋಜನೆ ಅಡಿ ವರ್ಷಕ್ಕೆ 6 ಸಾವಿರ ರೂ. ನೇರವಾಗಿ ರೈತರ ಖಾತೆಗೆ ಬರುತ್ತಿದೆ. ಇದರಲ್ಲಿ ಒಂದೆ ಒಂದು ರೂ. ಸೋರಿಕೆ ಆಗುವುದಿಲ್ಲ. ಜನಧನ ಖಾತೆ ಮೂಲಕ ಬಡ ವ್ಯಕ್ತಿ ಕೂಡಾ ಉಚಿತವಾಗಿ ಖಾತೆ ತೆರೆಯಲು ಅವಕಾಶ ನೀಡದ್ದು ಮೋದಿಯವರು. ದೇಶದಲ್ಲಿ ಸದಾ ಕಾಲ ಶಾಂತಿಯುತ ವಾತಾವರಣ ನಿರ್ಮಾಣವಾಗಿರಲು ಮೋದಿಯವರ ಆಡಳಿತ ಮುಖ್ಯವಾಗಿದೆ. ಹೀಗಾಗಿ ಮೇ 7 ರಂದು ಕಮಲ ಚಿಹ್ನೆಗೆ ಮತ ನೀಡುವ ಮೂಲಕ ಗೆಲ್ಲಿಸಬೇಕು ಎಂದು ಜಗದೀಶ್ ಶೆಟ್ಟರ್ ಅವರು ಮನವಿ ಮಾಡಿದರು.

ಬಳಿಕ ಮಾತನಾಡಿದ ಮಾಜಿ ರಾಜ್ಯಸಭಾ ಸದಸ್ಯ ಪ್ರಭಾಕರ ಕೋರೆ ಅವರು, ದೇಶದ ರಕ್ಷಣಾ ವಲಯದಲ್ಲಿ ಸದ್ಯದ ಉತ್ಪಾದನೆ 70% ಇದೆ. ಬುಲೆಟ್ ಪ್ರೂಫ್, ಲೈವ್ ಜಾಕೆಟ್ ಗಳು ಕೂಡಾ ದೇಶದಲ್ಲಿಯೇ ಉತ್ಪಾದನೆ ಮಾಡಲಾಗುತ್ತಿದೆ. ಈ ಹಿಂದೆ ನಮ್ಮ ನಾಯಕರು ಸರಿ ಇರಲಿಲ್ಲ. ಅವರಿಗೆ ಆಮದು ಮಾಡಿಕೊಳ್ಳುವುದು ಅಷ್ಟೇ ಗೊತ್ತಿತ್ತು. ಈ ಹಿಂದೆ ಸೋರ್ಸ್ ಇದ್ದರು ನಮಗೆ ಉತ್ಪಾದನೆ ಮಾಡಲು ಆಗಿಲ್ಲ. ಕ್ರೂಡ್ ಆಯಿಲ್ ನಾವು 100% ಆಮದು ಮಾಡಿಕೊಳ್ಳುತ್ತೇವೆ. ನಮ್ಮಲ್ಲಿ ಸಕ್ಕರೆ ಉತ್ಪಾದನೆ ಆರಂಭ ಆಗಿ 100 ವರ್ಷ ಆಯ್ತು, ನಮ್ಮ ಜಿಲ್ಲೆಯಲ್ಲಿ 28 ಸಕ್ಕರೆ ಕಾರ್ಖಾನೆಗಳಿವೆ. ಸಕ್ಕರೆ ಬೈ ಪ್ರೊಡೆಕ್ಟ್ ಎಥೆನಾಲ್. ನಾನು ನ್ಯಾಷನಲ್ ಶುಗರ್ ಫೆಡ್ರೇಶನ್ ಉಪಾಧ್ಯಕ್ಷ ಇದ್ದೆ, ಇಥೇನಾಲ್ ಉತ್ಪಾದನೆಗೆ ನಾವು 25 ವರ್ಷ ಹೋರಾಟ ಮಾಡಿದ್ದೇವೆ. 10% ಎಥೆನಾಲ್ ಪೆಟ್ರೋಲ್ ನಲ್ಲಿ ಸೇರಿಸಬಹುದು. ಆದರೆ ಈ ಹಿಂದೆ ಇದಕ್ಕೆ ಅನುಮತಿ ಸಿಗಲಿಲ್ಲ. ಆದರೆ ಮೋದಿಯವರು ಪ್ರಧಾನ ಆದ ಬಳಿಲ ಸಕ್ಕರೆ ಉದ್ಯಮದಲ್ಲಿ ಎಥೆನಾಲ್ ಉತ್ಪಾದನೆಗೆ ಉತ್ತೇಜನ ನೀಡಿದರು. ಎಥೆನಾಲ್ ಉತ್ಪಾದನೆಗೆ ಎಲ್ಲಾ ಸಕ್ಕರೆ ಕಾರ್ಖಾನೆಗೆ ಪರವಾನಿಗೆ ಮೋದಿಯವರು ನೀಡಿದರು. ಪೆಟ್ರೋಲಿಯಂ ನಲ್ಲಿ ಇಥಾನಲ್ 10% ದಿಂದ 20% ಸೇರಿಸಬಹುದಾದ ಶಕ್ತಿ ನಮ್ಮಲ್ಲಿ ಬಂದಿದೆ ಎಂದರು.ಕೇಂದ್ರ ಸಚಿವ ನೀತಿನ್ ಗಡ್ಕರಿ ಅವರು ಹೇಳಿದಂತೆ ಇಥಾನಾಲ್ ನ 100 ಪೆಟ್ರೋಲ್ ಬಂಕ್ಸ್ ಆರಂಭ ಆಗಲಿದೆ. ಮೋದಿಯವರು ಆಡಳಿತದಲ್ಲಿ ಕರ್ನಾಟಕದಲ್ಲಿಯೇ ಅತೀ ಬಡವರು 2.5 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ದೇಶದಲ್ಲೇ 16 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ಹಾಗಾಗಿ ಮತ್ತೊಮ್ಮೆ ದೇಶದಲ್ಲಿ ಮೋದಿ ಸರ್ಕಾರ ಯಾಕೆ ಬೇಕು ಎಂದು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಮೋದಿಯವರ ಕಾರ್ಯಕ್ರಮ ಮನೆ ಮನೆಗೆ ಮುಟ್ಟಬೇಕು. ಹೆಚ್ಚಿನ ಮತ ಜಗದೀಶ್ ಶೆಟ್ಟರ್ ಅವರಿಗೆ ನೀಡಿ ಗೆಲ್ಲಿಸಬೇಕು. ಜಗದೀಶ್ ಶೆಟ್ಟರ್ ಅವರು ತುಂಬಾ ನುರಿತ ವ್ಯಕ್ತಿ ಅವರು ಲೋಕಸಭೆಗೆ ಹೊದರೆ ಬೆಳಗಾವಿ ಜನರಿಗೆ ಅನೂಕುಲ ಆಗಲಿದೆ ಎಂದು ಹೇಳಿದರು.

ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ್, ಶೇಷಾದ್ರಿ ಕಾಲೇಜಿನ ಪ್ರಾಂಶುಪಾಲ ಎಸ್ ಎ ಪಾಟೀಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಚೇಂಬರ್ಸ್ ಆಫ್ ಕಾಮರ್ಸ್ ನಲ್ಲಿ ಸಭೆ: ಜಗದೀಶ್ ಶೆಟ್ಟರ್‌ಗೆ ಶಾಸಕ ಅಭಯ್ ಪಾಟೀಲ್ ಸಾಥ್



ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿಯ ಚೇಂಬರ್ಸ್ ಆಫ್ ಕಾಮರ್ಸ್ ಪದಾಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಸಭೆ ನಡೆಸಿ, ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಮತಯಾಚನೆ ಮಾಡಿದರು ಈ ವೇಳೆ ಶಾಸಕ ಅಭಯ್ ಪಾಟೀಲ್ ಸಾಥ್ ನೀಡಿದರು.

ಗುರುವಾರ ಸಾಯಂಕಾಲ ಉದ್ಯಮಬಾಗನಲ್ಲಿರುವ ಚೇಂಬರ್ಸ್ ಆಫ್ ಕಾಮರ್ಸ್ ಬಲ್ಲಿ ಬೆಳಗಾವಿ ಲೋಕಸಭಾ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಸಭೆ ಮಾಡುವ ಮೂಲಕ ಮತಯಾಚನೆ ಮಾಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವಿಶ್ವಗುರು ಆಗುವತ್ತ ದಾಪುಗಾಲು ಹಾಕುತ್ತಿದ್ದು, ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ಅವರ ಪ್ರತಿನಿಧಿಯಾಗಿ ಸ್ಪರ್ಧೆ ಮಾಡಿದ್ದೇನೆ. ತಾವೆಲ್ಲರೂ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುವಂತೆ ಜಗದೀಶ್ ಶೆಟ್ಟರ್ ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸಚಿನ ಸಭನಿಸ್, ರಾಮ್ ಭಂಡಾರಿ, ಸಿ.ಸಿ. ಹೊಂದಿನಕಟ್ಟಿ, ಆನಂದ ದೇಸಾಯಿ, ಶ್ರೀಧರ ಉಪ್ಪಿನ,ರೋಹನ ಜೂವಳಿ ಹಾಗೂ ಇತರರು ಉಪಸ್ಥಿತರಿದ್ದರು.

# ಜೈನ ಮುನಿಗಳ ಆಶೀರ್ವಾದ ಪಡೆದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಕಾಗವಾಡ ತಾಲೂಕಿನ ಉಗಾರ ಬುದ್ರುಕ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಶ್ರೀ ಮದ್ದೇವಾಧಿದೇವ ಶ್ರೀ ಭಗವಾನ 1008 ಆದಿನಾಥ ತೀರ್ಥಂಕರರ ನೂತನ ಜಿನಮಂದಿರದ ಶಿಖರ ಮಾನಸ್ತಂಭೋಪರಿ ಶ್ರೀ ಜಿನಬಿಂಬಗಳ ಪಂಚಕಲ್ಯಾಣ ಪ್ರತಿಷ್ಠಾ ಮಹಾಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಲೋಕೋಪಯೋಗಿ ಸಚಿವ ಹಾಗೂ ಜಿಲ್ಲಾಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಪ.ಪೂ. ಶ್ರೀ 108 ಬಾಲಾಚಾರ್ಯ ಧರ್ಮಪ್ರಭಾವಕ ಸಿದ್ದಸೇನಾ ಮುನಿ ಅವರ ಆಶೀರ್ವಾದ ಹಾಗೂ ಮಾರ್ಗದರ್ಶನ ಪಡೆದರು.

ಈ ವೇಳೆ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ಸರ್ವಧರ್ಮ ಸಮನ್ವಯತೆಯೇ ಶಾಂತಿಯ ಸಂಕೇತವಾಗಿದ್ದು ಇದನ್ನುಪ್ರತಿಯೊಬ್ಬರೂ ಪ್ರತಿಪಾದಿಸಬೇಕು. ಜೀವನ ಮೌಲ್ಯ, ಸಂಸ್ಕಾರದಿಂದಲೇ ಜೈನ್ ಧರ್ಮ ಗೌರವ ಪಡೆದಿದೆಯೇ ಹೊರತು ಸಂಖ್ಯಾ ಬಲದಿಂದ ಅಲ್ಲ ಎಂದ ಅವರು, ದೇಶದಲ್ಲಿ ಜೈನಸಮುದಾಯುದವರು ಧಾರ್ಮಿಕ ಆಚರಣೆಯಿಂದಲೇ ಸಮಾಜದಲ್ಲಿ ಎಲ್ಲರ ಪ್ರೀತಿಗೆಪಾತ್ರರಾಗಿದ್ದಾರೆ. ಇದು ಹೀಗೆಯೇ ಮುಂದುವರೆಯಬೇಕು. ಅಹಿಂಸಾವಾದಿಗಳಾಗಿ ಯಾವತ್ತು ಮಾದರಿ ವ್ಯಕ್ತಿಗಳಾಗಿ ನಿರ್ಮಾಣಗೊಳ್ಳಬೇಕು ಎಂದರು.

ಇದೇ ವೇಳೆ ಜೈನ ಸಮುದಾಯದಿಂದ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಸಚಿವರಾದ ವೀರಕುಮಾರ ಪಾಟೀಲ್, ಮಾಜಿ ಶಾಸಕರಾದ ಶ್ಯಾಮ್ ಘಾಟಗೆ, ಮೋಹನ್ ಶಾ, ಅಮರೆಗೌಡ ಬಯ್ಯಾಪುರ್, ಕಾಂಗ್ರೆಸ್ ಮುಖಂಡರಾದ ಅಭಿನಂದನ ಪಾಟೀಲ್, ಅಶೋಕ ಮಗದುಮ್ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಇದ್ದರು.

ಬೆಂಗಳೂರಿನ ಪದ್ಮನಾಭ ನಗರದ ಸಹಕಾರಿ ವಿದ್ಯಾ ಕೇಂದ್ರದ ಮತಗಟ್ಟೆಯಲ್ಲಿ ಚಲನಚಿತ್ರ ಪೋಷಕ ಕಲಾವಿದರ ಸಂಘದ ಕಾರ್ಯಕಾರಿ ಸದಸ್ಯ, ಪತ್ರಕರ್ತ, ಕರ್ನಾಟಕ ವರ್ಕಿಂಗ್ ಡಿಜಿಟಲ್ ಅಂಡ್ ಸೋಶಿಯಲ್ ಮಿಡಿಯಾ ಪ್ರಧಾನ ಕಾರ್ಯದರ್ಶಿ ಮತ್ತು ವೀರಶೈವ ಲಿಂಗಾಯುತ ಸಂಘಟನೆಯ ಉಪಾಧ್ಯಕ್ಷ ನಟರಾಜ್ ಹಂಜಾಗಿಮಠ ಇಂದು ನಡೆದ ಮತ ಹಬ್ಬ ಲೋಕಸಭಾ ಚುನಾವಣೆಯಲ್ಲಿ ಕುಟುಂಬ ಸಮೇತರಾಗಿ ಆಗಮಿಸಿ ಮತ ಚಲಾಯಿಸಿದರು.

